ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 29/11/20

# ಸಿಎಂ ಕಾರ್ಯದರ್ಶಿ ಸಂತೋಷ್ ಆತ್ಮಹತ್ಯೆ ಯತ್ನ: ಬಿಜೆಪಿ-ಕಾಂಗ್ರೆಸ್ ಬಿಗ್‌ಫೈಟ್!

## ವಿಡಿಯೋ ಬಳಸಿ ಬ್ಲ್ಯಾಕ್‌ಮೇಲ್ ಮಾಡಿದ್ದೇ ಕಾರಣ ಇರಬೇಕು: ಡಿಕೆಶಿ ಶಂಕೆ

## ವಿಡಿಯೋ ತಮ್ಮ ಬಳಿ ಇದ್ದರೆ ಡಿಕೆಶಿ ನೀಡಲಿ: ಬೊಮ್ಮಾಯಿ, ಈಶ್ವರಪ್ಪ ಸವಾಲು

• **ಕನ್ನಡಪ್ರಭ ವಾರ್ತೆ** ಬೆಂಗಳೂರು 29/11/20

ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಸಂತೋಷ್ ಆತ್ಮಹತ್ಯೆ ಯತ್ನ ಪ್ರಕರಣ ಇದೀಗ ರಾಜಕೀಯ ಸ್ವರೂಪ ಪಡೆದುಕೊಂಡಿದ್ದು ಪ್ರತಿಪಕ್ಷ ಕಾಂಗ್ರೆಸ್ ಮತ್ತು ಆಡಳಿತಾರೂಢ ಬಿಜೆಪಿ ಮುಖಂಡರ ನಡುವೆ ಪರಸ್ಪರ ಆರೋಪ-ಪ್ರತ್ಯಾರೋಪಗಳ ಸಮರವೇ ನಡೆದಿದೆ.



ಇದೊಂದು ಗಂಭೀರ ಪ್ರಕರಣವಾಗಿದ್ದು, ವೈಯಕ್ತಿಕ ವೀಡಿಯೋ ಒಂದನ್ನು ಇಟ್ಟುಕೊಂಡು ಬ್ಲ್ಯಾಕ್‌ಮೇಲ್ ಮಾಡಿರುವುದೇ ಸಂತೋಷ್ ಇಂತಹ ಒಂದು ನಿರ್ಧಾರತೆಗೆದುಕೊಳ್ಳಲುಕಾರಣವಾಗಿರಬೇಕು ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ. ಅವರ ಈ ಹೇಳಿಕೆಗೆ ತಿರುಗೇಟು ನೀಡಿರುವ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಪಂಚಾಯತ್ ರಾಜ್ ಸಚಿವ ಕೆ.ಎಸ್.ಈಶ್ವರಪ್ಪ ಹಾಗೂ ಕಂದಾಯ ಸಚಿವ ಆರ್.ಅಶೋಕ್, ಇದು ಹುರುಳಿಲ್ಲದ ಆರೋಪ. ಹಾಗೊಂದು ವೀಡಿಯೋ ಡಿ.ಕೆ. ಶಿವಕುಮಾರ್ ಅವರ ಬಳಿ ಇದ್ದರೆ, ಅದನ್ನವರು ಬಹಿರಂಗಪಡಿಸಲಿ ಎಂದು ಸವಾಲು ಹಾಕಿದ್ದಾರೆ.

↘ 7

### ಊಹಾಪೋಹಕ್ಕೆ ಪ್ರತಿಕ್ರಿಯಿಸಲ್ಲ



ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಹುದ್ದೆಯಿಂದ ರಾಜೀನಾಮೆ ನೀಡಲು ಸಂತೋಷ್‌ಗೆ ಸೂಚಿಸಲಾಗಿದೆ ಎಂಬ ವರದಿಗಳನ್ನು ಮಾಧ್ಯಮಗಳಲ್ಲಿ ನೋಡಿದ್ದೇನೆ. ಇಂತಹ ಊಹಾಪೋಹಗಳಿಗೆ ಪ್ರತಿಕ್ರಿಯೆ ನೀಡುವುದಿಲ್ಲ. ಸಂತೋಷ್ ಚೇತರಿಸಿಕೊಳ್ಳುತ್ತಿದ್ದಾರೆ. ಅವರು ಡಿಸ್ಚಾರ್ಜ್ ಆದ ಬಳಿಕ ಅವರ ಸಮಸ್ಯೆ ಬಗ್ಗೆ ಕುಳಿತು ಚರ್ಚಿಸಲಾಗುವುದು.

• **ವಿಜಯೇಂದ್ರ**, ರಾಜ್ಯ ಬಿಜೆಪಿ ಉಪಾಧ್ಯಕ್ಷ

# ಸಿಎಂ ಕಾರ್ಯದರ್ಶಿ ಸಂತೋಷ್ ಆತ್ಮಹತ್ಯೆ ಯತ್ನ: ಬಿಜೆಪಿ-ಕಾಂಗ್ರೆಸ್ ಬಿಗ್‌ಫೈಟ್!

ಮೊದಲ ಪುಟದಿಂದ

ಕಾರವಾರದಲ್ಲಿ ಶನಿವಾರ ಸುದ್ದಿಗಾರರೊಂದಿಗ ಮಾತನಾಡಿದ ಡಿ.ಕೆ.ಶಿವಕುಮಾರ್ ಅವರು, ಸಂತೋಷ್ ಆತ್ಮಹತ್ಯೆ ಯತ್ನ ಪ್ರಕರಣ ಗಂಭೀರ ವಿಚಾರವಾಗಿದ್ದು ಈ ಬಗ್ಗೆ ತನಿಖೆಯಾಗಿ ಸತ್ಯಾಂಶ ಹೊರಬರಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಒಂದು ವಿಡಿಯೋವನ್ನು ಎಂಎಲ್‌ಸಿ ಹಾಗೂ ಸಚಿವರೊಬ್ಬರು ದೆಹಲಿಯ ರಾಷ್ಟ್ರೀಯ ನಾಯಕರಿಗೆ ಕೊಟ್ಟಿದ್ದಾರೆ. ಆ ವಿಡಿಯೋ ಇಟ್ಟುಕೊಂಡು ಸಂತೋಷ್ ಅವರನ್ನು ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೋ ಏನು ಮಾಡುತ್ತಿದ್ದರೋ ಎನ್ನುವುದು ಗೊತ್ತಿಲ್ಲ ಎಂದು ತಿಳಿಸಿದರು.

ಡಿ.ಕೆ.ಶಿವಕುಮಾರ್ ಅವರ ಈ ಹೇಳಿಕೆ ವಿರುದ್ಧ ಹರಿಹಾಯ್ದಿರುವ ಸಚಿವ ಈಶ್ವರಪ್ಪ, ಇದೊಂದು ಮುಠ್ಠಾಳತನದ ಹೇಳಿಕೆಯಾಗಿದ್ದು, ಈ ರೀತಿ ಹೇಳಿಕೆ ನೀಡಿರುವುದಕ್ಕೆ ಅವರಿಗೆ ನಾಚಿಕೆಯಾಗಬೇಕು. ಅವರು ರಾಜ್ಯದ ಜನರ ದಿಕ್ಕು ತಪ್ಪಿಸುತ್ತಿದ್ದು, ಲೀಕ್ ಆಗಿದೆ ಎನ್ನುವ ವಿಡಿಯೋ ಅವರ ಬಳಿ ಇದ್ದರೆ ಬಿಡುಗಡೆ ಮಾಡಲಿ ಎಂದು ಈಶ್ವರಪ್ಪ ಸವಾಲು ಹಾಕಿದರು. ಇದೇವೇಳೆ ಅವರು ಹೇಳುತ್ತಿರುವ ಎಂಎಲ್‌ಎ ಯಾರು? ಎಂಎಲ್‌ಸಿ ಯಾರು? ಮಂತ್ರಿ ಯಾರು ಎಂಬುದನ್ನೂ ಬಹಿರಂಗಪಡಿಸಬೇಕು ಎಂದು ಆಗ್ರಹಿಸಿದರು.

ಅತ್ತ ರಾಯಚೂರಲ್ಲಿ ಸುದ್ದಿಗಾರರ ಪ್ರಶ್ನೆಗಳಿಗೆ ಉತ್ತರಿಸಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಡಿ.ಕೆ.ಶಿವಕುಮಾರ್ ಅವರು ಆರೋಪಿಸಿರುವ ಹಾಗೆ ಅವರ ಬಳಿ ಆ ವಿಡಿಯೋ ಇದ್ದರೆ ಕೊಡಲಿ. ಅದನ್ನೂ ತನಿಖೆಗೊಳಪಡಿಸಲಾಗುವುದುಎಂದುಸ್ಪಷ್ಟಪಡಿಸಿದ್ದಾರೆ. ಸಂತೋಷ ಕುಮಾರ ಆತ್ಮಹತ್ಯೆಗೆ ಯತ್ನಿಸಿದ ಘಟನೆಗೆ ಸಂಬಂಧಿಸಿದಂತೆ ಈಗಾಗಲೇ ಬೆಂಗಳೂರಿನ ಸದಾಶಿವನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಆಘಾತ ಆಗಿದೆ: ವಿಜಯೇಂದ್ರ

### ರಾಜೀನಾಮೆಗೆ ಸೂಚನೆ ಎಂಬ ಬಗ್ಗೆ ಪ್ರತಿಕ್ರಿಯಿಸಲ್ಲ ಯಾರಿಗೆ ಯಾವ ಸ್ಥಾನ ನೀಡಬೇಕೆಂದು ಸಿಎಂಗೆ ಗೊತ್ತು



ಬೆಂಗಳೂರು: 'ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಹುದ್ದೆಗೆ ರಾಜೀನಾಮೆ ಕೊಡುವಂತೆ ಎನ್. ಆರ್. ಸಂತೋಷ್ ಅವರಿಗೆ ಹೇಳಲಾಗಿದೆ ಎಂಬ ಬಗ್ಗೆ ಪ್ರತಿಕ್ರಿಯಿಸುವುದಿಲ್ಲ, ಯಾರಿಗೆ ಯಾವ ಸ್ಥಾನ, ಗೌರವ ನೀಡಬೇಕೆಂಬುದು ಮುಖ್ಯಮಂತ್ರಿಗಳಿಗೆ ಗೊತ್ತಿದೆ' ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಪ್ರತಿಕ್ರಿಯಿಸಿದ್ದಾರೆ.

ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಸ್ಥಾನ, ಗೌರವ ನೀಡುವ ಕೆಲಸವನ್ನು ಮುಖ್ಯಮಂತ್ರಿಗಳು ಮಾಡುತ್ತಾ ಬರುತ್ತಿದ್ದಾರೆ' ಎಂದು ಹೇಳಿದರು.

**ಶಾಕ್ ಆಗಿದೆ:** 'ಎನ್.ಆರ್. ಸಂತೋಷ್ ಅವರ ಆತ್ಮಹತ್ಯೆ ಯತ್ನ ಪ್ರಕರಣ ನನಗೆ ಆಘಾತ ತಂದಿದೆ. ಮುಖ್ಯಮಂತ್ರಿ ಯಡಿಯೂರಪ್ಪ ಅವರು ಆಸ್ಪತ್ರೆಗೆ ಭೇಟಿ ನೀಡಿ ಸಂತೋಷ್ ಆರೋಗ್ಯ ವಿಚಾರಿಸಿದ್ದಾರೆ. ಸಂತೋಷ್ ಆರೋಗ್ಯದಲ್ಲಿ ಚೇತರಿಕೆ ಕಂಡು ಬಂದಿದ್ದು, ಆಸ್ಪತ್ರೆಯಿಂದ ಬಿಡುಗಡೆ ಯಾದ ಬಳಿಕ ಅವರ ಸಮಸ್ಯೆಗಳ ಬಗ್ಗೆ ಕುರಿತು ಚರ್ಚೆ ನಡೆಸಲಾಗುವುದು' ಎಂದು ತಿಳಿಸಿದರು.

ಇದೇ ವೇಳೆ, ರಾಜ್ಯದಲ್ಲಿ ಮುಂಬರುವ ಉಪ ಚುನಾವಣೆಯನ್ನು ಪಕ್ಷ ಗಂಭೀರವಾಗಿ ಪರಿಗಣಿಸಿದೆ. ಹಿಂದಿನ ಉಪ ಚುನಾವಣೆಗಳಲ್ಲಿ ಸಿಕ್ಕಿರುವ ಗೆಲುವನ್ನು ಮುಂದುವರೆಸಿಕೊಂಡು ಹೋಗಬೇಕೆಂಬ ಕಾರಣ ದಿಂದಾಗಿ ಎಲ್ಲ ಚುನಾವಣೆಯನ್ನು ಗಂಭೀರವಾಗಿ ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು.

ಅವರು ಆಸ್ಪತ್ರೆಯಲ್ಲಿ ಚೇತರಿಸಿಕೊಳ್ಳುತ್ತಿದ್ದು ಮೂರು ದಿನಗಳಲ್ಲಿ ಎಲ್ಲ ವಿಷಯ ಗೊತ್ತಾಗಲಿದೆ ಎಂದರು.

ಡಿಕೆಶಿ ಆರೋಪ ನಿರಾಕರಿಸಿರುವ ಸಚಿವ ಆರ್. ಅಶೋಕ್, ಆತ್ಮಹತ್ಯೆಗೆ ಯತ್ನಕ್ಕೆ ಆ ಒಂದು ವಿಡಿಯೋ ಕಾರಣಎಂಬಡಿ.ಕೆ.ಶಿವಕುಮಾರ್ ಅವರಆರೋಪದಲ್ಲಿ ಯಾವುದೇ ಹುರುಳಿಲ್ಲ ಎಂದು ಹೇಳಿದರು. ಈ ಬಗ್ಗೆ ಸಂತೋಷ್ ಅವರೇ ತಿಳಿಸಬೇಕು. ಅವರೊಂದಿಗೆ ನಾನೇ ದೂರವಾಣಿ ಮೂಲಕ ಮಾತನಾಡುವೆ ಎಂದರು. ಡಿ.ಕೆ. ಶಿವಕುಮಾರ್ ಆರೋಪಗಳಿಗೆ ಪ್ರತಿಕ್ರಿಯಿಸಲು ನಿರಾಕರಿಸಿರುವ ಉಪ ಮುಖ್ಯಮಂತ್ರಿ ಡಾ. ಅಶ್ವತ್ಥನಾರಾಯಣ್, ಈಬಗ್ಗೆಯಾವುದೇಮಾಹಿತಿಯಿಲ್ಲ ಎಂದಷ್ಟೇ ಹೇಳಿದ್ದಾರೆ.